# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 39

ಸದಸ್ಯರ ಹೆಸರು : ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 12-09-2022

ಉತ್ತರಿಸುವ ಸಚಿವರು : ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

***

| | ಪ್ರಶ್ನೆ | ಉತ್ತರ |
|---|---|---|
| ಅ) | ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ಎಲ್ಲಾ ಗ್ರಾಮಗಳಿಗೂ ನಿರಂತರ ಜ್ಯೋತಿ ಯೋಜನೆಯಡಿ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆಯೇ; | ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ವ್ಯಾಪ್ತಿಯ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ಎಲ್ಲಾ ಗ್ರಾಮಗಳಲ್ಲಿ ನಿರಂತರ ಜ್ಯೋತಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದ್ದು, 11 ಕೆವಿ ನಿರಂತರ ಜ್ಯೋತಿ ಯೋಜನೆಯ ಫೀಡರ್‌ಗಳ ಮೂಲಕ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. |
| ಆ) | ಇಲ್ಲದಿದ್ದಲ್ಲಿ, ಯಾವ ಯಾವ ಗ್ರಾಮಗಳಿಗೆ ಈ ಯೋಜನೆಯಡಿ ವಿದ್ಯುತ್ ಸರಬರಾಜು ವ್ಯವಸ್ಥೆಯನ್ನು ಇನ್ನೂ ಕಲ್ಪಿಸದಿರಲು ಕಾರಣಗಳೇನು; ಯಾವ ಕಾಲಮಿತಿಯೊಳಗೆ ಈ ಗ್ರಾಮಗಳಿಗೆ ವಿದ್ಯುತ್ ಸರಬರಾಜು ಮಾಡಲಾಗುವುದು; (ಮಾಹಿತಿ ನೀಡುವುದು) | |
| ಇ) | ನಿರಂತರ ಜ್ಯೋತಿ ಯೋಜನೆ ಜಾರಿ ಬಂದು ಹಲವಾರು ವರ್ಷಗಳು ಕಳೆದಿದ್ದರೂ ಸಹ, ರಾಜ್ಯದ ನೂರಾರು ಗ್ರಾಮಗಳಿಗೆ ಈ ಯೋಜನೆಯಡಿ ಇನ್ನೂ ವಿದ್ಯುತ್ ಸರಬರಾಜು ವ್ಯವಸ್ಥೆ ಕಲ್ಪಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಈ ಗ್ರಾಮಗಳಿಗೆ ವಿದ್ಯುತ್ ಸರಬರಾಜು ಮಾಡಲಾಗುವುದು? (ವಿವರ ನೀಡುವುದು) | ರಾಜ್ಯದ ವಿದ್ಯುತ್ ಸರಬರಾಜು ಕಂಪನಿಗಳಾದ ಬೆಸ್ಕಾಂ, ಸೆಸ್ಕ್, ಹೆಸ್ಕಾಂ ಮತ್ತು ಜೆಸ್ಕಾಂಗಳ ವ್ಯಾಪ್ತಿಯಲ್ಲಿ ನಿರಂತರ ಜ್ಯೋತಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದ್ದು, ಅವುಗಳ ವಿವರಗಳು ಕೆಳಕಂಡಂತಿವೆ:-<br><br>**ಬೆಸ್ಕಾಂ :**<br>ಬೆವಿಕಂ ವ್ಯಾಪ್ತಿಯ ಬೆಂಗಳೂರು ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರ, ರಾಮನಗರ, ತುಮಕೂರು, ದಾವಣಗೆರೆ ಮತ್ತು ಚಿತ್ರದುರ್ಗ ಒಟ್ಟು 7 ಜಿಲ್ಲೆಗಳ ಎಲ್ಲಾ ಗ್ರಾಮಗಳಲ್ಲಿ ನಿರಂತರ ಜ್ಯೋತಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದ್ದು, 11 ಕೆವಿ ನಿರಂತರ ಜ್ಯೋತಿ ಯೋಜನೆಯ ಫೀಡರ್‌ಗಳ ಮೂಲಕ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ.<br><br>**ಸೆಸ್ಕ್ :-**<br>ಚಾವಿಸನಿನಿ ವ್ಯಾಪ್ತಿಯಲ್ಲಿ 179 ಗ್ರಾಮಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಗ್ರಾಮಗಳಿಗೂ ನಿರಂತರ ಜ್ಯೋತಿ ಯೋಜನೆಯು ಅನುಷ್ಠಾನಗೊಂಡಿರುತ್ತದೆ. |

...2

ನಿರಂತರ ಜ್ಯೋತಿ ಯೋಜನೆ ಅನುಷ್ಠಾನಗೊಳ್ಳದ 179 ಗ್ರಾಮಗಳಿಗೆ RDSS ಯೋಜನೆಯಲ್ಲಿ ನಿರಂತರ ವಿದ್ಯುತ್ ಸಂಪರ್ಕ ಕಲ್ಪಿಸಲು ಉದ್ದೇಶಿಸಿದ್ದು, ಸದರಿ ಯೋಜನೆಗೆ ಅನುಮೋದನೆ ದೊರೆತ ನಂತರ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು.

**ಹೆಸ್ಕಾಂ:**

ಹುವಿಸಕಂ ನಿಯಮಿತ ವ್ಯಾಪ್ತಿಯ 6 ಜಿಲ್ಲೆಗಳ ಗ್ರಾಮಗಳಿಗೆ ನಿರಂತರ ಜ್ಯೋತಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿರುತ್ತದೆ.

ಮುಂದುವರೆದು ಉತ್ತರ ಕನ್ನಡ ಜಿಲ್ಲೆಯಲ್ಲಿ ಈಗಾಗಲೇ ನಿರಂತರ ವಿದ್ಯುತ್ ಪೂರೈಕೆ ಮಾಡುತ್ತಿರುವುದರಿಂದ ನಿರಂತರ ಜ್ಯೋತಿ ಯೋಜನೆಯನ್ನು ಅನುಷ್ಠಾನಗೊಳಿಸಿರುವುದಿಲ್ಲ.

**ಜೆಸ್ಕಾಂ:**

ಗು.ವಿ.ಸ.ಕಂಪನಿ ವ್ಯಾಪ್ತಿಯಲ್ಲಿ ಒಟ್ಟು 4116 ಗ್ರಾಮಗಳಿದ್ದು, ಅವುಗಳ ಪೈಕಿ 4053 ಗ್ರಾಮಗಳಿಗೆ ನಿರಂತರ ಜ್ಯೋತಿ ಯೋಜನೆಯಡಿ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿರುತ್ತದೆ. ಉಳಿದ 63 ಗ್ರಾಮಗಳಿಗೆ ನಿರಂತರ ವಿದ್ಯುತ್ ಸಂಪರ್ಕ ಕಲ್ಪಿಸಲು ಕೇಂದ್ರ ಸರ್ಕಾರದ ಯೋಜನೆಯಾದ Revamped Distribution Sector Scheme (RDSS) ಯೋಜನೆಯಲ್ಲಿ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಅನುಮೋದನೆ ದೊರೆತ ನಂತರ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು.

**ಮೆಸ್ಕಾಂ :**

ಮೆಸ್ಕಾಂ ವ್ಯಾಪ್ತಿಯಲ್ಲಿ 'ನಿರಂತರ ಜ್ಯೋತಿ' ಯೋಜನೆಯನ್ನು ಅನುಷ್ಠಾನಗೊಳಿಸಿರುವುದಿಲ್ಲ.

ಆದಾಗ್ಯೂ, ಕೇಂದ್ರ ಸರ್ಕಾರದ ದೀನ ದಯಾಳ್ ಉಪಾಧ್ಯಾಯ ಗ್ರಾಮ ಜ್ಯೋತಿ ಯೋಜನೆಯಡಿ ಶಿವಮೊಗ್ಗ ಹಾಗೂ ಚಿಕ್ಕಮಗಳೂರು ಜಿಲ್ಲೆಗಳ ಗ್ರಾಮೀಣ ಫೀಡರ್‌ಗಳಲ್ಲಿ ಕೃಷಿ ಹಾಗೂ ಕೃಷಿಯೇತರ ಸ್ಥಾವರಗಳನ್ನು ಬೇರ್ಪಡಿಸಲು 'ಫೀಡರ್ ಬೇರ್ಪಡಿಸುವಿಕೆ' ಕಾಮಗಾರಿಯನ್ನು ಒಟ್ಟು 1289 ಗ್ರಾಮಗಳಲ್ಲಿ ಅನುಷ್ಠಾನಗೊಳಿಸಲಾಗಿದೆ

ಮುಂದುವರೆದು, ಪ್ರಸ್ತುತ RDSS ಯೋಜನೆಯಡಿ ಶಿವಮೊಗ್ಗ ಹಾಗೂ ಚಿಕ್ಕಮಗಳೂರು ಜಿಲ್ಲೆಗಳ 79 ಗ್ರಾಮೀಣ ಫೀಡರಗಳಲ್ಲಿ 'ಫೀಡರ್ ಬೇರ್ಪಡಿಸುವಿಕೆ' ಕಾಮಗಾರಿಗೆ ಪ್ರಸ್ತಾವನೆಯನ್ನು ಆರ್.ಇ.ಸಿ/ಇಂಧನ ಇಲಾಖೆಗೆ ಸಲ್ಲಿಸಲಾಗಿದ್ದು, ಸದರಿ ಪ್ರಸ್ತಾವನೆಯಲ್ಲಿ 762 ಗ್ರಾಮ/ ಉಪಗ್ರಾಮಗಳು ಒಳಗೊಂಡಿರುತ್ತವೆ.

| | | |
|---|---|---|
| | | ಉಳಿದಂತೆ, ಶಿವಮೊಗ್ಗ, ಹಾಗೂ ಚಿಕ್ಕಮಗಳೂರು ಜಿಲ್ಲೆಗಳ 7 ತಾಲ್ಲೂಕುಗಳ 82 ಗ್ರಾಮೀಣ ಫೀಡರ್‌ಗಳು ಮಲೆನಾಡು ಪ್ರದೇಶದಲ್ಲಿರುವುದರಿಂದ ಹಾಗೂ ಭೌಗೋಳಿಕ/ತಾಂತ್ರಿಕ ಕಾರಣದಿಂದಾಗಿ ಈ ಫೀಡರ್‌ಗಳಲ್ಲಿ 'ಫೀಡರ್ ಬೇರ್ಪಡಿಸುವಿಕೆ' ಕಾಮಗಾರಿ ಕೈಗೊಳ್ಳುವುದು ಕಷ್ಟ ಸಾಧ್ಯವಾಗಿರುತ್ತದೆ. ಆದರೆ ಫೀಡರ್ ಬೇರ್ಪಡಿಸುವಿಕೆ ನಿರ್ವಹಿಸಲು ಕಷ್ಟ ಸಾಧ್ಯವಾದ ಹಾಗೂ RDSS ಯೋಜನೆಯಡಿ ಪ್ರಸ್ತಾವನೆ ಸಲ್ಲಿಸಲಾದ ಪ್ರದೇಶಗಳಲ್ಲಿ ಪ್ರಸ್ತುತ ದಿನವಹಿ ಸರಾಸರಿ 15:41 ಗಂಟೆಗಳ 3 ಫೇಸ್, 3:05 ಸಿಂಗಲ್ ಫೇಸ್ ಒಟ್ಟು ಸರಾಸರಿ 18:46 ಗಂಟೆಗಳ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ.<br><br>ಅಲ್ಲದೆ, ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿಯೂ ಭೌಗೋಳಿಕ ಹಾಗೂ ತಾಂತ್ರಿಕ ಕಾರಣದಿಂದಾಗಿ 'ಫೀಡರ್ ಬೇರ್ಪಡಿಸುವಿಕೆ' ಕಾಮಗಾರಿಯನ್ನು ಕೈಗೆತ್ತಿಕೊಂಡಿರುವುದಿಲ್ಲ. ಆದಾಗ್ಯೂ, ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳ ಗ್ರಾಮೀಣ ಪ್ರದೇಶದಲ್ಲಿ ಗ್ರಾಮಗಳಿಗೆ ದಿನವಹಿ ಸರಾಸರಿ 22:25 ಗಂಟೆಗಳ 3 ಫೇಸ್ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. |

ಸಂಖ್ಯೆ: ಎನರ್ಜಿ 182 ಇಬಿಎಸ್ 2022

(ವಿ ಸುನಿಲ್ ಕುಮಾರ್)
ಇಂಧನ ಹಾಗೂ ಕನ್ನಡ ಮತ್ತು
ಸಂಸ್ಕೃತಿ ಸಚಿವರು